RNU AIR DHARWAD

# FEBRUARY 24,2025
# ALL INDIA RADIO- DHARWAD
# PRADESH SAMACHARA (KANNADA) 12PM

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

**ಓದಿದವರು: ವಿವೇಕಾದಿತ್ಯ ಕನಿಯಾಲ**

<><><>

**ಉತ್ತರ ಕರ್ನಾಟಕದಲ್ಲಿ ಪ್ರತಿಭಾನ್ವಿತ ಕಲಾವಿದರು ಹಾಗೂ ಸಾಹಿತಿಗಳಿದ್ದು, ಅವರನ್ನು ಗುರುತಿಸಿ, ಪ್ರೋತ್ಸಾಹಿಸುವ ಕಾರ್ಯವಾಗಬೇಕಿದೆ ಎಂದು ವಿಧಾನ ಪರಿ ‘ತ್ ಸಭಾಪತಿ ಬಸವರಾಜ ಹೊರಟ್ಟಿ ಅಭಿಪ್ರಾಯ ವ್ಯಕ್ತಪಡಿಸಿದರು. ಬಾಗಲಕೋಟೆ ಜಿಲ್ಲೆ, ಮುಧೋಳ ರನ್ನ ಕ್ರೀಡಾಂಗಣದ, ಚಾವುಂಡರಾಯ ಮುಖ್ಯ ವೇದಿಕೆಯಲ್ಲಿ ಆಯೋಜಿಸಲಾದ ರನ್ನ ವೈಭವದ ಎರಡನೇ ದಿನದಂದು ‘ಸಾಧಕರಿಗೆ ಸನ್ಮಾನ’ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಕನ್ನಡ ಮತ್ತು ಸಂಸ್ಕೃತಿ ಖಾತೆ ಸಚಿವರಾದ ಶಿವರಾಜ.ಎಸ್ ತಂಗಡಗಿ, ರಾಜ್ಯ ಸರ್ಕಾರವು ಕಲೆ ಹಾಗೂ ಸಾಹಿತ್ಯ ಕ್ಷೇತ್ರಕ್ಕೆ ಹೆಚ್ಚಿನ ಒತ್ತು ನೀಡುತ್ತಿದೆ ಎಂದರು.**

<><><>

**ಬೈಟ್: ಶಿವರಾಜ ಎಸ್. ತಂಗಡಗಿ 29 ಸೆಕೆಂದುಗಳು**

<><><>

**ಆಧ್ಯಾತ್ಮಿಕ ಮತ್ತು ಮಾನಸಿಕ ಯೋಗಕ್ಷೇಮಕ್ಕಾಗಿ, ಇಂದು ಪ್ರಪಂಚ, ಭಾರತದ ಕಡೆಗೆ ನೋಡುತ್ತಿವೆ; ಪ್ರಯಾಗ್‌ರಾಜ್‌ನ ಮಹಾಕುಂಭ ಉದಾಹರಣೆ ಎಂದು, ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಹೇಳಿದ್ದಾರೆ. ತುಮಕೂರು ಜಿಲ್ಲೆ, ಕುಣಿಗಲ್ ತಾಲೂಕು ಬಿದನಗೆರೆಯ, ಶ್ರೀ ಬಸವೇಶ್ವರ ಮಠದ ಧಾರ್ಮಿಕ ಕಾರ್ಯಕ್ರಮದಲ್ಲಿ ಅವರು ಪಾಲ್ಗೊಂಡು, ಮಾತನಾಡಿದರು. ಭಾರತೀಯ ಸಂಸ್ಕೃತಿ, ಭ್ರಾತೃತ್ವ, ಶಾಂತಿ, ವಿಶ್ವ ಕಲ್ಯಾಣ, ಸಮಾನತೆ ಮತ್ತು ಸಾಮರಸ್ಯವನ್ನು ಪ್ರೇರೇಪಿಸುತ್ತದೆ ಎಂದರು.**

<><><>

**ರಂಗ ಚಳವಳಿ ಮೂಲಕ ಸಮಾಜಿಕ, ಸಾಂಸ್ಕೃತಿಕ ಸಮಸ್ಯೆಗಳಿಗೆ ಸ್ಪಂದಿಸುವಂತೆ ರಂಗಭೂಮಿ ಬೆಳೆಯಬೇಕು ಎಂದು ಹಿರಿಯ ನಾಟಕಕಾರ ಕೆ.ವೈ ನಾರಾಯಣಸ್ವಾಮಿ ಹೇಳಿದರು. ಧಾರವಾಡ ಕರ್ನಾಟಕ ಮಹಾವಿದ್ಯಾಲಯದ ಸಭಾಂಗಣದಲ್ಲಿ ನಡೆದ ನಿರ್ದಿಗಂತ–2025 ಉತ್ಸವದಲ್ಲಿ ‘ಸಮಕಾಲೀನ ರಂಗಭೂಮಿ–ಕಸಬುಗಾರಿಕೆಯ ಹುಡುಕಾಟ’ ಕುರಿತು ಅವರು ಮಾತನಾಡಿದರು.**

<><><>

ಹುಬ್ಬಳ್ಳಿಯ ಶ್ರೀ ಸಿದ್ಧಾರೂಢರ ಜಾತ್ರಾ ಮಹೋತ್ಸವ ಇದೇ ಬರುವ 27 ನೇ ತಾರೀಖಿನಂದು ವಿಜೃಂಭಣೆಯಿಂದ ಜರುಗಲಿದೆ. ಭಜನೆ ಕೀರ್ತನೆ ಪೂಜೆ ಮಹಾಪ್ರಸಾದ ಅನ್ನಸಂತರ್ಪಣೆ ಸಹಿತ ವಿಶಿಷ್ಟ ಧಾರ್ಮಿಕ ಕಾರ್ಯಕ್ರಮಗಳಿಗೆ ಸಾಕ್ಷಿಯಾಗಲಿದೆ. ಈ ಬಗ್ಗೆ ತಮ್ಮ ಎಕ್ಸ್ ಖಾತೆಯಲ್ಲಿ ಮಾಹಿತಿ ಹಂಚಿಕೊಂಡಿರುವ ಕೇಂದ್ರ ನವ ಹಾಗೂ ನವೀಕರಿಸಬಹುದಾದ ಇಂಧನ ಖಾತೆ ಸಚಿವ ಪ್ರಲ್ಹಾದ್ ಜೋಷಿಯವರು ಸಿದ್ಧಾರೂಢರ ಅಂಗಾರ ದೇಶಕ್ಕೆಲ್ಲ ಬಂಗಾರ, ನಾಡಿನ ಭವ್ಯ ಸಂತ ಪರಂಪರೆಯ ಆರಾಧನೆಗಾಗಿ ಹುಬ್ಬಳ್ಳಿ ನಗರದ ಆರಾಧ್ಯರಾದ ಶ್ರೀ ಸಿದ್ಧಾರೂಢ ಮಹಾಸ್ವಾಮಿಗಳ ಜಾತ್ರೆಗೆ ಆಗಮಿಸುತ್ತಿರುವ ಎಲ್ಲ ಭಕ್ತರಿಗೂ ಆತ್ಮೀಯವಾದ ಸ್ವಾಗತ ಕೋರಿದ್ದಾರೆ.

<><><>

ಕೂಡಲಿಯ ಶ್ರೀಮದ್ ಜಗದ್ಗುರು ಶಂಕರಾಚಾರ್ಯ, ಶೃಂಗೇರಿ ಮಹಾಸಂಸ್ಥಾನಮ್ ದಕ್ಷಿಣಾಮ್ನಾಯ ಮೂಲ ಶ್ರೀಶಾರದಾ ಪೀಠಮ್ ನ ಪೀಠಾಧಿಪತಿಗಳಾದ ಜಗದ್ಗುರು ಶ್ರೀ ವಿದ್ಯಾಭಿನವ ವಿದ್ಯಾರಣ್ಯ ಭಾರತಿ ಸ್ವಾಮಿಗಳು, ಉತ್ತರಪ್ರದೇಶದ ತ್ರಿವೇಣಿ ಸಂಗಮ ಪ್ರಯಾಗ್ ರಾಜ್‌ನಲ್ಲಿ ಜರುಗುತ್ತಿರುವ ಮಹಾಕುಂಭಮೇಳದಲ್ಲಿ ಪಾಲ್ಗೊಂಡು ವಿವಿಧ ಧಾರ್ಮಿಕ ಕಾರ್ಯಗಳನ್ನು ನೆರವೇರಿಸಿದರು. ಇದೇ ಸಂದರ್ಭ, ಶ್ರೀ ಕಂಚಿ ಕಾಮಕೋಟಿ ಜಗದ್ಗುರು ಶ್ರೀ ಶಂಕರ ವಿಜಯೇಂದ್ರ ಸರಸ್ವತಿ ಸ್ವಾಮಿಗಳಿಂದ ರಚಿತವಾದ ಮಹಾಕುಂಭಮೇಳ ಕುರಿತ ಕೃತಿಯನ್ನು ಲೋಕಾರ್ಪಣೆ ಮಾಡಲಾಯಿತು.

<><><>

ಉತ್ತರ ಪ್ರದೇಶದ ಪ್ರಯಾಗರಾಜ್ ಮಹಾಕುಂಭ ಮೇಳಕ್ಕೆ ತೆರಳುತ್ತಿದ್ದ ಸಂದರ್ಭ, ರಸ್ತೆ ಅಪಘಾತದಲ್ಲಿ ಮೃತಪಟ್ಟ ಬೀದರ್ ಜಿಲ್ಲೆ ಲಾಡಗೇರಿಯ ಒಟ್ಟು ಐದು ಜನರ ಮೃತದೇಹಗಳು ಇಂದು ಮಧ್ಯಾಹ್ನ 2 ಗಂಟೆಗೆ ಬೀದರ ಗೆ ತಲುಪಲಿದೆ. ಬೀದರ್ ಜಿಲ್ಲಾಡಳಿತವು ವಾರಾಣಸಿ ಜಿಲ್ಲಾಡಳಿತದೊಂದಿಗೆ ಸಂಪರ್ಕದಲ್ಲಿದೆ.

<><><>

ಕೊಪ್ಪಳದಲ್ಲಿ ಬೃಹತ್ ಉದ್ಯಮ ಆರಂಭಿಸಲು, ಖಾಸಗಿ ಕಂಪನಿಗೆ ಭೂಮಿ ನೀಡಲು ಮುಂದಾಗಿರುವ ರಾಜ್ಯ ಸರ್ಕಾರದ ಕ್ರಮವನ್ನು ಖಂಡಿಸಿ ಪರಿಸರ ಹಿತರಕ್ಷಣಾ ವೇದಿಕೆ ಕೊಪ್ಪಳ ಜಿಲ್ಲಾ ಬಂದ್ ಗೆ ಕರೆ ನೀಡಿದೆ. ಇಂದು ಬೆಳಗ್ಗೆ ಆರಂಭಗೊಂಡ ಪ್ರತಿಭಟನಾ ಮೆರವಣಿಗೆಯಲ್ಲಿ ಮಾಜಿ ಸಂಸದ ಸಂಗಣ್ಣ ಕರಡಿ, ವಿಧಾನ ಪರಿಷತ್ ಸದಸ್ಯೆ ಹೇಮಲತಾ ನಾಯಕ ಅವರು ಭಾಗವಹಿಸಿದರು. ಕೊಪ್ಪಳ ಶಾಸಕ ರಾಘವೇಂದ್ರ ಹಿಟ್ನಾಳ ಪಾಲ್ಗೊಂಡರು. ಜಿಲ್ಲಾಡಳಿತದ ವತಿಯಿಂದ ಕೊಪ್ಪಳ ಬಂದ್ ಹಿನ್ನೆಲೆಯಲ್ಲಿ ಶಾಲಾ, ಕಾಲೇಜುಗಳಿಗೆ ರಜೆ ಘೋಷಿಸಲಾಗಿದೆ.

<><><>

ಯಾದಗಿರಿ ಜಿಲ್ಲೆಯಲ್ಲಿ, ಮಾರ್ಚ್ 7ರ ವರೆಗೆ, 5 ಸಾವಿರ ಪ್ರಕರಣಗಳನ್ನು ಇತ್ಯರ್ಥ ಪಡಿಸುವ ಗುರಿ ಹೊಂದಲಾಗಿದೆ ಎಂದು, ಜಿಲ್ಲಾ ನ್ಯಾಯಾಧೀಶ ಮರಿಯಪ್ಪ ತಿಳಿಸಿದ್ದಾರೆ. ಮಾರ್ಚ್ 8 ರಂದು ರಾಷ್ಟ್ರೀಯ ಲೋಕ ಅದಾಲತ್ ಆಯೋಜಿತವಾಗಿದೆ.

<><><>

ಶಿವರಾತ್ರಿ ಪ್ರಯುಕ್ತ, ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ, ಹುಬ್ಬಳ್ಳಿ, ಧಾರವಾಡ, ಗದಗ, ಬೆಳಗಾವಿ, ಉತ್ತರಕನ್ನಡ, ಹಾವೇರಿ, ಚಿಕ್ಕೋಡಿ ಮತ್ತು ಬಾಗಲಕೋಟೆ ವಿಭಾಗಗಳಿಂದ, 160 ಹೆಚ್ಚುವರಿ ವಿಶೇಷ ಬಸ್‌ಗಳನ್ನು ನಿಯೋಜಿಸಿದೆ.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 1 ಗಂಟೆ 10 ನಿಮಿಷಕ್ಕೆ..